**2002ರ ಕರ್ನಾಟಕ ಅಧಿನಿಯಮ ಸಂಖ್ಯೆ 15**

# ಕರ್ನಾಟಕ ಸರ್ಕಾರಿ ಖಾತರಿಗಳ ಮೇಲಿನ ಮಿತಿ (ತಿದ್ದುಪಡಿ) ಅಧಿನಿಯಮ, 2002

## ಪ್ರಕರಣಗಳ ಪಟ್ಟಿ

*ಪ್ರಕರಣಗಳು:*

1. ಸಂಕ್ಷಿಪ್ತ ಹೆಸರು ಮತ್ತು ಪ್ರಾರಂಭ

2. 5ನೇ ಪ್ರಕರಣದ ತಿದ್ದುಪಡಿ

## ಉದ್ದೇಶ ಮತ್ತು ಕಾರಣಗಳ ಹೇಳಿಕೆ

ಕೃಷಿ ಉದ್ದೇಶಕ್ಕಾಗಿ ಕರ್ನಾಟಕ ರಾಜ್ಯ ಸಹಕಾರ ಅಪೆಕ್ಸ್ ಬ್ಯಾಂಕ್ ಲಿಮಿಟೆಡ್ ಮತ್ತು ಕರ್ನಾಟಕ ರಾಜ್ಯ ಸಹಕಾರ ಕೃಷಿ ಮತ್ತು ಗ್ರಾಮೀಣ ಭೂ ಅಭಿವೃದ್ಧಿ ಬ್ಯಾಂಕ್ ಲಿಮಿಟೆಡ್ ಇವು ನೀಡಿದ ಸಾಲಗಳಿಗಾಗಿ 01-04-2001 ರಿಂದ 31-03-2002 ರ ಅವಧಿಯಲ್ಲಿ ನೀಡಲಾದ ಖಾತರಿಗಳ ಸಂಬಂಧದಲ್ಲಿ ಯಾವುದೇ ಖಾತರಿ ಕಮೀಷನ್ ವಿಧಿಸತಕ್ಕದ್ದಲ್ಲವೆಂಬ ಬಗ್ಗೆ ಮತ್ತು ಸದರಿ ಅವಧಿಯಲ್ಲಿ ಅವು ವಿತರಣೆ ಮಾಡಿದ ಕೃಷಿ ಸಾಲಗಳ ಸಂಬಂಧದಲ್ಲಿ ಅವುಗಳ ಸಾಲ ನೀಡಿಕೆ ದರದಲ್ಲಿ ಶೇಕಡಾ ಒಂದರಷ್ಟು ಬಡ್ಡಿಯನ್ನು ಕಡಿಮೆ ಮಾಡುವಂತೆ ಅವುಗಳನ್ನು ಅಗತ್ಯಪಡಿಸುವ ಬಗ್ಗೆ ಉಪಬಂಧ ಕಲ್ಪಿಸುವುದಕ್ಕಾಗಿ ಕರ್ನಾಟಕ ಸರ್ಕಾರಿ ಖಾತರಿಗಳ ಮೇಲೆ ಮಿತಿ ಅಧಿನಿಯಮ, 1999 ಕ್ಕೆ (1999ರ ಕರ್ನಾಟಕ ಅಧಿನಿಯಮ, 11) ತಿದ್ದುಪಡಿ ಮಾಡುವುದು ಅವಶ್ಯಕವೆಂದು ಪರಿಗಣಿಸಲಾಗಿದೆ.

ಆದ್ದರಿಂದ ಈ ವಿಧೇಯಕ.

(2002ರ ವಿಧಾನಸಭೆಯ ವಿಧೇಯಕ ಸಂಖ್ಯೆ 4)

## 2002ರ ಕರ್ನಾಟಕ ಅಧಿನಿಯಮ ಸಂಖ್ಯೆ 15

*(2002ರ ಆಗಸ್ಟ್ ಮೂವತ್ತನೇ ದಿನಾಂಕದಂದು ಕರ್ನಾಟಕ ರಾಜ್ಯಪತ್ರದ ವಿಶೇಷ ಸಂಚಿಕೆಯಲ್ಲಿ ಪ್ರಕಟವಾಗಿದೆ)*

# ಕರ್ನಾಟಕ ಸರ್ಕಾರಿ ಖಾತರಿಗಳ ಮೇಲಿನ ಮಿತಿ (ತಿದ್ದುಪಡಿ) ಅಧಿನಿಯಮ, 2002

*(2002ರ ಆಗಸ್ಟ್ ಇಪ್ಪತ್ತೇಳನೇ ದಿನಾಂಕದಂದು ಕರ್ನಾಟಕ ರಾಜ್ಯಪಾಲರ ಅನುಮತಿಯನ್ನು ಪಡೆಯಲಾಗಿದೆ)*

ಕರ್ನಾಟಕ ಸರ್ಕಾರಿ ಖಾತರಿಗಳ ಮೇಲಿನ ಮಿತಿ ಅಧಿನಿಯಮ, 1999 ನ್ನು ತಿದ್ದುಪಡಿ ಮಾಡಲು ಒಂದು ಅಧಿನಿಯಮ.

ಇಲ್ಲಿ ಇನ್ನು ಮುಂದೆ ಕಂಡುಬರುವ ಉದ್ದೇಶಗಳಿಗಾಗಿ ಕರ್ನಾಟಕ ಸರ್ಕಾರಿ ಖಾತರಿಗಳ ಮೇಲಿನ ಮಿತಿ ಅಧಿನಿಯಮ, 1999ನ್ನು (1999ರ ಕರ್ನಾಟಕ ಅಧಿನಿಯಮ 11) ತಿದ್ದುಪಡಿ ಮಾಡುವುದು ಯುಕ್ತವಾಗಿರುವುದರಿಂದ;

ಇದು ಭಾರತ ಗಣರಾಜ್ಯದ ಐವತ್ತೂರನೇ ವರ್ಷದಲ್ಲಿ ಕರ್ನಾಟಕ ರಾಜ್ಯ ವಿಧಾನ ಮಂಡಲದಿಂದ ಈ ಮುಂದಿನಂತೆ ಅಧಿನಿಯಮಿತವಾಗಲಿ:-

1. **ಸಂಕ್ಷಿಪ್ತ ಹೆಸರು ಮತ್ತು ಪ್ರಾರಂಭ.-** (1) ಈ ಅಧಿನಿಯಮವನ್ನು ಕರ್ನಾಟಕ ಸರ್ಕಾರಿ ಖಾತರಿಗಳ ಮೇಲಿನ ಮಿತಿ (ತಿದ್ದುಪಡಿ) ಅಧಿನಿಯಮ, 2002 ಎಂದು ಕರೆಯತಕ್ಕದ್ದು.

(2) ಇದು 2001ರ ಏಪ್ರಿಲ್ ಒಂದನೇ ದಿನಾಂಕದಿಂದ ಜಾರಿಗೆ ಬಂದಿರುವುದಾಗಿ ಭಾವಿಸತಕ್ಕದ್ದು.

2. **5ನೇ ಪ್ರಕರಣದ ತಿದ್ದುಪಡಿ.-** ಕರ್ನಾಟಕ ಸರ್ಕಾರಿ ಖಾತರಿಗಳ ಮೇಲಿನ ಮಿತಿ ಅಧಿನಿಯಮ, 1999ರ (1999ರ ಕರ್ನಾಟಕ ಅಧಿನಿಯಮ 11) 5ನೇ ಪ್ರಕರಣದಲ್ಲಿ (1)ನೇ ಉಪ ಪ್ರಕರಣದ ತರುವಾಯ ಈ ಮುಂದಿನ ಪರಂತುಕವನ್ನು ಸೇರಿಸತಕ್ಕದ್ದು, ಎಂದರೆ:-

"ಪರಂತು, 2001ರ ಏಪ್ರಿಲ್ ಒಂದನೇ ದಿನಾಂಕದಿಂದ 2002ರ ಮಾರ್ಚ್ ಮೂವತ್ತೊಂದನೇ ದಿನಾಂಕದವರೆಗಿನ ಅವಧಿಯಲ್ಲಿ ಕರ್ನಾಟಕ ರಾಜ್ಯ ಸಹಕಾರಿ ಅಪೆಕ್ಸ್ ಬ್ಯಾಂಕ್ ನಿಯಮಿತ, ಮತ್ತು ಕರ್ನಾಟಕ ರಾಜ್ಯ ಸಹಕಾರಿ ಕೃಷಿ ಮತ್ತು ಗ್ರಾಮೀಣ ಭೂ ಅಭಿವೃದ್ಧಿ ಬ್ಯಾಂಕ್ ನಿಯಮಿತ ಇವು ಕೃಷಿಯ ಉದ್ದೇಶಕ್ಕಾಗಿ ನೀಡಿದ ಸಾಲಗಳಿಗಾಗಿ ಸರ್ಕಾರವು ನೀಡಿದ ಖಾತರಿಯ ಸಂಬಂಧದಲ್ಲಿ ಖಾತರಿ ಕಮಿಷನನ್ನು ವಿಧಿಸತಕ್ಕದ್ದಲ್ಲ.

---

ಕರ್ನಾಟಕ ರಾಜ್ಯ ಪತ್ರದ ಭಾಗ-IVಎ ವಿಶೇಷ ಪತ್ರಿಕೆ ಸಂಖ್ಯೆ: 1260 ದಿನಾಂಕ: 30.8.2002 ರಲ್ಲಿ ಪ್ರಕಟಿತ
ಕಡತ ಸಂಖ್ಯೆ: ಸಂವ್ಯಶಾಇ 55 ಶಾಸನ 2001

ಮತ್ತು ಪರಂತು, ಕರ್ನಾಟಕ ರಾಜ್ಯ ಸಹಕಾರಿ ಅಪೆಕ್ಸ್ ಬ್ಯಾಂಕ್ ನಿಯಮಿತ ಮತ್ತು ಕರ್ನಾಟಕ ರಾಜ್ಯ ಸಹಕಾರಿ ಕೃಷಿ ಮತ್ತು ಗ್ರಾಮೀಣ ಅಭಿವೃದ್ಧಿ ಬ್ಯಾಂಕ್ ನಿಯಮಿತ, ಇವು 2001ರ ಏಪ್ರಿಲ್ ಒಂದನೇ ದಿನಾಂಕದಿಂದ 2002ರ ಮಾರ್ಚ್ ಮೂವತ್ತೊಂದನೇ ದಿನಾಂಕದವರೆಗಿನ ಅವಧಿಯಲ್ಲಿ ಅವುಗಳು ವಿತರಣೆ ಮಾಡಿದ ಎಲ್ಲಾ ಕೃಷಿ ಸಾಲಗಳ ಮೇಲಿನ ಬಡ್ಡಿ ದರದಲ್ಲಿ ಶೇಕಡಾ ಒಂದರಷ್ಟು ಕಡಿಮೆ ಮಾಡತಕ್ಕದ್ದು."